ತಾವರೆಗೇರಿ ಗ್ರಾಮಕ್ಕೆ ಸರಿಯಾದ ವಿದ್ಯುತ್ ಇಲ್ಲದಿರುವ ಬಗ್ಗೆ.

1604 ಶ್ರೀ ಎಂ. ಮಲ್ಲಿಕಾರ್ಜುನ, (ಕನಕಗಿರಿ):- ಮಾನ್ಯ ಕೈಗಾರಿಕ ಮತ್ತು ಇಂಧನ, ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಷ್ಟಗಿ ತಾಲ್ಲೂಕಿನ ತಾವರೆಗೇರಿ ಗ್ರಾಮಕ್ಕೆ ಬಹುದಿನಗಳಿಂದ ಸರಿಯಾಗಿ ವಿದ್ಯುತ್ ಪೂರೈಕೆ ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು?

ಆ) ಈ ಗ್ರಾಮಕ್ಕೆ ಸಮರ್ಪಕ ವಿದ್ಯುತ್ ಪೂರೈಸಲು ಸರ್ಕಾರವು ಕೈಗೊಳ್ಳಲುದ್ದೇಶಿಸಿರುವ ಕ್ರಮವೇನು?

ಇ) ತಾವರೆಗೇರಿ ಗ್ರಾಮದಲ್ಲಿ ವಿದ್ಯುತ್ ಉಪಕೇಂದ್ರವನ್ನು ತೆರೆಯಲು ಅಲ್ಲಿಯ ನಾಗರೀಕರು ಸ್ಥಳ ಕೊಟ್ಟಿದ್ದು ಇಲ್ಲಿಯವರೆವಿಗೂ ಕಾರ್ಯ ಪ್ರಾರಂಭ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಈ ಕಾರ್ಯವನ್ನು ಕೂಡಲೇ ಕೈಗೊಳ್ಳಲಾಗುವುದೆ?

ಶ್ರೀ ಎಸ್.ಎಂ. ಯಾಹ್ಯ (ಕೈಗಾರಿಕೆ, ಇಂಧನ ಮತ್ತು ವಕ್ಫ್ ಸಚಿವರು.)

ಅ) ಕುಷ್ಟಗಿ ತಾಲ್ಲೂಕಿನ ತಾವರೆಗೇರಿ ಗ್ರಾಮಕ್ಕೆ ಮಾರ್ಚ್ 1990ರಲ್ಲಿ ಸ್ವಲ್ಪ ದಿವಸ ಸರಿಯಾಗಿ ವಿದ್ಯುತ್ ಪೂರೈಕೆ ಆಗಿದ್ದುದು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಗಮನಕ್ಕೆ ಬಂದಿದೆ. ಇದಕ್ಕೆ ಕಾರಣ ಕುಷ್ಟಗಿ ವಿದ್ಯುತ್ ಉಪಕೇಂದ್ರದಲ್ಲಿರುವ ಒಂದು 5 ಎಂ.ವಿ.ಎ. ಟ್ರಾನ್ಸ್‌ಫಾರ್ಮರ್ 21-3-1990ರಂದು ಕೆಟ್ಟಿದ್ದರಿಂದ, ಈ ತಾಲ್ಲೂಕಿನಲ್ಲಿ 21-3-1990 ರಿಂದ 26-3-1990ರವರೆವಿಗೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಸಾಧ್ಯವಾಗಲಿಲ್ಲ.

ಆ) ಕುಷ್ಟಗಿ ತಾಲ್ಲೂಕಿನ ತಾವರೆಗೇರಿಯಲ್ಲಿ 1 x 5 ಎಂ.ವಿ.ಎ. ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್ ಇರುವ 33 - 11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು 8ನೇ ಪಂಚವಾರ್ಷಿಕ ಯೋಜನೆಯಲ್ಲಿ ಸ್ಥಾಪಿಸಲು ಮಂಡಳಿಯು ಉದ್ದೇಶಿಸಿದೆ.

ಇ) ಈ ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗಿರುವ ಸ್ಥಳವನ್ನು ಸ್ವಾಧೀನ ಪಡಿಸಿಕೊಳ್ಳಲು ಕ್ರಮ ತೆಗೆದುಕೊಳ್ಳಲಾಗಿದೆ.

ಈ) ಈ ವಿದ್ಯುತ್ ಉಪಕೇಂದ್ರವನ್ನು 1991-92ನೇ ಸಾಲಿನಲ್ಲಿ ಸ್ಥಾಪಿಸಲು ಉದ್ದೇಶವಿದೆ.

ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಬಗ್ಗೆ.

223 ಶ್ರೀ ಎಂ.ಪಿ. ವೆಂಕಟೇಶ್ (ಹೆಗ್ಗಡದೇವನ ಕೋಟೆ):- ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಸಮಾಜ ಕಲ್ಯಾಣ ಸಚಿವರ ಪರವಾಗಿ) ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ತಿಂಗಳಿಗೆ ರೂ.300ಗಳ ವಿದ್ಯಾರ್ಥಿವೇತನ ಕೊಡಲು ಉದ್ದೇಶಿಸಲಾಗಿದೆಯೇ?

ಆ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :-.. ಸಮಾಜ ಕಲ್ಯಾಣ ಸಚಿವರ ಪರವಾಗಿ.

ಅ) ಇಲ್ಲ.

ಆ) ಮೆಟ್ರಿಕ್ ನಂತರ ಕಾಲೇಜಿಗೆ ಹೋಗುವ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಕೇಂದ್ರ ಸರ್ಕಾರವು ಇತ್ತೀಚೆಗೆ ತಾನೆ ಹೆಚ್ಚಿಸಿರುವುದರಿಂದ ವಿದ್ಯಾರ್ಥಿವೇತನವನ್ನು 300ರೂ.ಗಳಿಗೆ ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇಲ್ಲ.